# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 991 |
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20-08-2025 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೀದರ್ ತಾಲೂಕಿನ ಚಿಟ್ಟಾದಿಂದ ಘೋಡಂಪಳ್ಳಿಗೆ ಸಂಚರಿಸುವ ರಸ್ತೆ ತುಂಬಾ ಹಾಳಾಗಿದ್ದು ದಿನನಿತ್ಯ ಸಂಚರಿಸುವ ಜನರು ರಾತ್ರಿ ವೇಳೆಯಲ್ಲಿ ಸಾಕಷ್ಟು ಬಿದ್ದು ಗಾಯಗೊಂಡಿರುವುದು ಮತ್ತು ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿರುವ ಬಗ್ಗೆ ಕಳೆದ ಎರಡು ವರ್ಷಗಳಿಂದ ಸ್ಥಳೀಯರು ಪ್ರತಿಭಟನೆ ಮನವಿ ಸಲ್ಲಿಸಿದರೂ ಇಲ್ಲಿಯವರೆಗೆ ಯಾವುದೇ ರಸ್ತೆ ಕಾಮಗಾರಿ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; | ಬೀದರ್ ತಾಲೂಕಿನ ಬೀದರ್ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಚಿಟ್ಟಾದಿಂದ ಘೋಡಂಪಳ್ಳಿ ರಸ್ತೆಯ ಒಟ್ಟು ಉದ್ದ 4.00 ಕಿ.ಮಿ. ಇರುತ್ತದೆ.<br>• ಕಿ.ಮಿ.0.00 ದಿಂದ 2.595 ರವರೆಗೆ ರಸ್ತೆಯ ಮೇಲ್ಮೈ ಉತ್ತಮವಾಗಿದ್ದು, ಸುಸ್ಥಿತಿಯಲ್ಲಿರುತ್ತದೆ.<br>• ಕಿ.ಮಿ.2.595 ರಿಂದ 4.00 ರವರೆಗೆ ರಸ್ತೆ ನಿರ್ವಹಣೆ ಮಾಡುವುದು ಅವಶ್ಯಕವಾಗಿರುವುದು ಗಮನಕ್ಕೆ ಬಂದಿದ್ದು, ಕಿ.ಮೀ.2.595 ರಿಂದ 2.936 ವರೆಗೆ ಲೆಕ್ಕ ಶೀರ್ಷಿಕೆ 5054-ಅಪೆಂಡಿಕ್ಸ್-ಇ ಜಿಲ್ಲಾ ಮುಖ್ಯ ರಸ್ತೆ ಸುಧಾರಣೆ ಅಡಿಯಲ್ಲಿ ರೂ:60.00 ಲಕ್ಷಗಳು ಮಂಜೂರಾಗಿ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಕಾಮಗಾರಿ ಪ್ರಾರಂಭಿಸಲಾಗುವುದು.<br>• ಕಿ.ಮೀ.2.595 ರಿಂದ 4.00 ವರೆಗೆ ರಸ್ತೆ ಸಂಚಾರಕ್ಕೆ ಯಾವುದೇ ಅಡಚಣೆ ಆಗದಂತೆ ರಸ್ತೆಯನ್ನು ತಾತ್ಕಾಲಿಕವಾಗಿ ದುರಸ್ತಿಗೊಳಿಸಿ ಸಂಚಾರಕ್ಕೆ ಅನುವು ಮಾಡಲಾಗಿದೆ. |
| ಆ) | ಸರ್ಕಾರವು ಈ ರಸ್ತೆ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಕೈಗೊಳ್ಳುವುದು? (ಮಾಹಿತಿ ನೀಡುವುದು) | |

ಸಂಖ್ಯೆ: ಲೋಇ 101 ಸಿಐಎಸ್ 2025 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು